**ಕರ್ನಾಟಕ ವಿಧಾನ ಪರಿಷತ್**

| | |
|---|---|
| **ಚುಕ್ಕೆ ಗುರುತ್ತಿಲ್ಲದ ಪ್ರಶ್ನೆ ಸಂ** | 1190 |
| **ಸದಸ್ಯರ ಹೆಸರು** | ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ) |
| **ಉತ್ತರಿಸಬೇಕಾದ ದಿನಾಂಕ** | 15.12.2023 |
| **ಉತ್ತರಿಸುವವರು** | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು |

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ.</td><td>ಮಂಡ್ಯ ಜಿಲ್ಲೆ, ಪಾಂಡವಪುರ ತಾಲ್ಲೂಕು ಮೇಲುಕೋಟೆ ಹೊಬಳಿಯ ಕದಲಗೆರೆಯಿಂದ ಕಾಡೇನಹಳ್ಳಿ ಗ್ರಾಮಕ್ಕೆ ಹೋಗುವ ರಸ್ತೆಯ ಸಂಪೂರ್ಣ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಪ್ರಸ್ತುತ ರಸ್ತೆಯ ಸ್ಥಿತಿಗತಿಗಳ ಬಗ್ಗೆ ಪರಿಶೀಲಿಸಿ ವರದಿಯನ್ನು ನೀಡುವುದು;</td><td rowspan="3">• ಮಂಡ್ಯ ಜಿಲ್ಲೆ, ಪಾಂಡವಪುರ ತಾಲ್ಲೂಕು ಮೇಲುಕೋಟೆ ಹೋಬಳಿಯ ಕದಲಗೆರೆಯಿಂದ ಕಾಡೇನಹಳ್ಳಿ ಗ್ರಾಮಕ್ಕೆ ಹೋಗುವ ರಸ್ತೆಯನ್ನು ಮೇಲ್ದರ್ಜೆಗೇರಿಸಲು ಲೋಕೋಪಯೋಗಿ ಇಲಾಖಾ ವ್ಯಾಪ್ತಿಗೆ ಹಸ್ತಾಂತರ ಮಾಡಿಲಾಗಿದೆ.<br><br>• 2022-23ನೇ ಸಾಲಿನಲ್ಲಿ ಅಂದಾಜು ಮೊತ್ತ ರೂ. 350.00 ಲಕ್ಷಗಳಿಗೆ ತಾಂತ್ರಿಕ ಅನುಮೋದನೆಯಾಗಿದ್ದು, ಶೀಘ್ರದಲ್ಲಿ ಕಾಮಗಾರಿಯನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗಿದೆ.</td></tr>
<tr><td>ಆ</td><td>ಸದರಿ ರಸ್ತೆಯ ಡಾಂಬರೀಕರಣ ಕುರಿತು ಹಿಂದೆ ಮಾಡಲಾದ ಸಂಪೂರ್ಣ ವಿವರ ನೀಡುವುದು ಪ್ರಸ್ತುತ ಉಂಟಾದ ಮಳೆಯ ಅವಾಂತರದಿಂದ ರಸ್ತೆಯು ತುಂಬಾ ಹದಗೆಟ್ಟಿರುವುದರ ಬಗ್ಗೆ ಅಧಿಕಾರಿಗಳು ಪರಿಶೀಲಿಸಿದ್ದಾರೆಯೆ: ಅದರ ವಿವರಗಳನ್ನು ಒದಗಿಸುವುದು;</td></tr>
<tr><td>ಇ</td><td>ಕದಲಗೆರೆಯಿಂದ ಕಾಡೇನಹಳ್ಳಿ ಗ್ರಾಮಕ್ಕೆ ಹೋಗುವ ರಸ್ತೆಯ ಮುಖಾಂತರ ಸಾರ್ವಜನಿಕರು ಹಾಗೂ ಶಾಲೆಗೆ ಹೋಗುವ ಮಕ್ಕಳು ಓಡಾಡಲು ತುಂಬಾ ತೊಂದರೆಯಾಗಿರುವುದರಿಂದ ರಸ್ತೆ ಡಾಂಬರೀಕರಣವನ್ನು ತುರ್ತಾಗಿ ಮಾಡಲಾಗುವುದೇ: ಹಾಗೂ ಹಿಂದಿನ ಸರ್ಕಾರದಲ್ಲಿ ಮಂಜೂರಾಗಿದ್ದ ರಸ್ತೆ ಡಾಂಬರೀಕರಣ ಕಾಮಗಾರಿಯು ಸ್ಥಗಿತಗೊಂಡಿರುವುದರಿಂದ ಯಾವಾಗ ಪ್ರಾರಂಭ ಮಾಡಲಾಗುವುದು ಇದರ ಬಗ್ಗೆ ಸಂಪೂರ್ಣ ಮಾಹಿತಿ ನೀಡುವುದು?</td></tr>
</table>

**ಗ್ರಾಅಪ/ಆರ್‌ಆರ್‌ಸಿ/151ನೇಅ/LCQ-1190/2023**

**(ಪ್ರಿಯಾಂಕ್ ಖರ್ಗೆ)**
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು